ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ - ಮಳೆಹಾನಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 25/10/20

# ಮಳೆ ಪ್ರದೇಶದಲ್ಲಿ ಸಿಎಂ ಸಿಟಿ ರೌಂಡ್ಸ್

## ಬೆಂಗಳೂರಿನಲ್ಲಿ ಮಳೆ ಹಾನಿ ಪ್ರದೇಶಗಳ ವೀಕ್ಷಣೆ

## ಹಾನಿ: 700 ಮನೆಗಳಿಗೆ ತಲಾ ₹25000 ಪರಿಹಾರ



ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಶನಿವಾರ ಮಳೆ ಹಾನಿ ಪ್ರದೇಶವನ್ನು ವೀಕ್ಷಿಸಿದರು.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜಧಾನಿಯಲ್ಲಿ ಶುಕ್ರವಾರ ಭಾರಿ ಮಳೆಯಿಂದ ಸಂತ್ರಸ್ತರಾದವರ ನೆರವಿಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಖುದ್ದು ಧಾವಿಸಿದ್ದಾರೆ. ಮಳೆಯಿಂದಾಗಿ ಮನೆಯಲ್ಲಿದ್ದ ವಸ್ತುಗಳು ಹಾನಿಯಾಗಿರುವ ಪ್ರತಿ ಕುಟುಂಬಕ್ಕೆ 25 ಸಾವಿರ ರು. ಪರಿಹಾರ ನೀಡುವುದಾಗಿ ಯಡಿಯೂರಪ್ಪ ಘೋಷಿಸಿದ್ದಾರೆ.

ಶನಿವಾರ ಹೊಸಕೆರೆಹಳ್ಳಿ, ದತ್ತಾತ್ರೇಯನಗರ ಹಾಗೂ ಕುಮಾರಸ್ವಾಮಿ ಲೇಔಟ್ ಪ್ರದೇಶಗಳಲ್ಲಿ ಮಳೆಯಿಂದ ಉಂಟಾಗಿರುವ ಅನಾಹುತವನ್ನು ಖುದ್ದಾಗಿ ಯಡಿಯೂರಪ್ಪ ಪರಿಶೀಲಿಸಿದರು. ಈ ವೇಳೆ ಸಂತ್ರಸ್ತರ ಕುಟುಂಬಕ್ಕೆ ರೇಷನ್ ಕಿಟ್ ವಿತರಿಸಿ, ಧೈರ್ಯ ಹೇಳಿದರು.

ಬಳಿಕ ಮಾತನಾಡಿದ ಅವರು, ಬಿಬಿಎಂಪಿ ವ್ಯಾಪ್ತಿಯಲ್ಲಿ ಧಾರಾಕಾರ ಮಳೆ ಸುರಿದ ಪರಿಣಾಮ ಈ ಅನಾಹುತಗಳು ಸಂಭವಿಸಿವೆ. ಈ ಬಗ್ಗೆ ಪಾಲಿಕೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು, ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದ್ದೇನೆ. ನೀರು ನುಗ್ಗಿ ಬಟ್ಟೆ, ದವಸ-ಧಾನ್ಯ ಸೇರಿದಂತೆ ವಸ್ತುಗಳು ಹಾಳಾಗಿರುವ ಪ್ರತಿ ಕುಟುಂಬಕ್ಕೆ ಚೆಕ್ ಮೂಲಕ 25 ಸಾವಿರ ರು. ಪರಿಹಾರ ನೀಡುವುದಾಗಿ ಹೇಳಿದರು.